ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,ಬೆಳಗಾವಿ

**Visvesvaraya Technological University**

"Jnana Sangama", Belagavi - 590 018, Karnataka State

REGISTRAR

Phone : (0831) 2498100

Fax : (0831) 2405467

Ref VTU/BGM/Aca-OS/Gen-Cirs/2019-20/ 604 Date : 27 APR 2019

**ಸುತ್ತೋಲೆ**

ವಿಷಯ : ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಎಸ್‌ಸಿ/ ಎಸ್‌ಟಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕ ಪಾವತಿ ವಿನಾಯಾತಿ ಕುರಿತು

ಉಲ್ಲೇಖ: ಸರ್ಕಾರಿ ಪತ್ರ ಸಂಖ್ಯೆ ಇಡಿ ೧೧೪ ಯುಎನ್ಇ ೨೦೧೯ ದಿ: ೨೮-೦೩-೨೦೧೯

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಆದೇಶ ಸಂಖ್ಯೆ ಇಡಿ ೧೧೪ ಯುಎನ್ಇ ೨೦೧೯ ದಿ: ೨೮-೦೩-೨೦೧೯ ಲಗತ್ತಿಸಲಾಗಿದೆ.

ಕಾರಣ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಎಲ್ಲ ಕಾಲೇಜುಗಳು ಸದರಿ ಸರ್ಕಾರಿ ಸುತ್ತೋಲೆಯಲ್ಲಿ ನಮೂದಿಸಿದ ಅಂಶಗಳಂತೆ ಗಮನಿಸಿ, ಸೂಕ್ತ ಕ್ರಮ ಜರುಗಿಸಲು ಹಾಗೂ ಸಂಬಂದಿಸಿದವರಿಗೆ ಮಾಹಿತಿ ನೀಡಲು ಈ ಮೂಲಕ ತಿಳಿಸಲಾಗಿದೆ.

ಅಡಕ: ಮೇಲಿನಂತೆ

ಕುಲಸಚಿವರು
ವಿ.ತಾ.ವಿ. ಬೆಳಗಾವಿ

ಇವರಿಗೆ,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಎಲ್ಲ ಅಧೀನ ಮಹಾವಿದ್ಯಾಲಯಗಳ (ಸಂಯೋಜಿತ, ಸ್ವಾಯತ್ತ ಹಾಗೂ ಘಟಕ) ಪ್ರಾಂಶುಪಾಲರಿಗೆ

ಪ್ರತಿ ಮಾಹಿತಿಗಾಗಿ:

೧. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹು ಮಹಡಿ ಕಟ್ಟಡ, ಬೆಂಗಳೂರು – ೫೬೦ ೦೦೧
೨. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ), ಬಹು ಮಹಡಿ ಕಟ್ಟಡ, ಬೆಂಗಳೂರು – ೫೬೦ ೦೦೧
೩. ಕುಲಪತಿಗಳ ಕಾರ್ಯದರ್ಶಿಗಳು, ವಿತಾವಿ, ಬೆಳಗಾವಿ
೪. ಸಿಎನ್‌ಸಿ ಘಟಕ ವಿತಾವಿ, ಬೆಳಗಾವಿ

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 114 ಯುಎನ್ಇ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 28-03-2019.

Inward No. 399
Date

ಇಂದ:
ಸರ್ಕಾರದ ಉಪ ಮುಖ್ಯ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು - 560 001.

ಇವರಿಗೆ:

1. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
3. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
4. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ-577 451.
5. ಕುಲಸಚಿವರು, ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ - 585 106.
6. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199.
7. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101
8. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ-583 276.
9. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು-570 006.
10. ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ-586 101.
11. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
12. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
13. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
14. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
15. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು.
16. ಕುಲಸಚಿವರು, ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
17. ಕುಲಸಚಿವರು, ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ.
18. ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು
19. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕ, ಕೋಲಾರ ಜಿಲ್ಲೆ.

ಮಾನ್ಯರೆ,

ವಿಷಯ: ರಾಜ್ಯದ ವಿಶ್ವವಿದ್ಯಾಲಯಗಳಲ್ಲಿನ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕ ಪಾವತಿ ವಿನಾಯಿತಿ ನೀಡುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ದಲಿತ ಸಂಘಟನೆಗಳ ಮಹಾ ಒಕ್ಕೂಟ, ರಾಜ್ಯ ಸಮಿತಿ, ಬೆಂಗಳೂರು ಇವರ ದಿನಾಂಕ: 16-01-2019ರ ಪತ್ರ ಮತ್ತು ಅದರೊಂದಿಗಿನ ಅಡಕವನ್ನು ಈ ಪತ್ರದೊಂದಿಗೆ ಲಗತ್ತಿಸಿದೆ. ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಪ್ರವೇಶಾತಿ ಸಮಯದಲ್ಲಿ ಶುಲ್ಕ ವಿನಾಯಿತಿ ನೀಡಲು ಸರ್ಕಾರದ ಆದೇಶ ಸಂಖ್ಯೆ:ಸಕಇ 83, ಪಕವಿ 2013, ದಿನಾಂಕ: 27-06-2013ರಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಆದರೆ, ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ಈ ಆದೇಶವನ್ನು ಪಾಲಿಸುತ್ತಿಲ್ಲವಾದ್ದರಿಂದ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸುಗಳಿಗೆ ದಾಖಲಾತಿಯಾಗಲು ಸಾಧ್ಯವಾಗುತ್ತಿಲ್ಲವಾದ್ದರಿಂದ, ಈ ಬಗ್ಗೆ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಹಾಗೂ ಕಾಲೇಜುಗಳಿಗೆ ನಿರ್ದೇಶನ ನೀಡಲು ಸದರಿ ಪತ್ರದಲ್ಲಿ ಕೋರಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ:ಸಕಇ 83, ಪಕವಿ 2013, ದಿನಾಂಕ: 27-06-2013ರಲ್ಲಿ ಶುಲ್ಕ ಮರುಪಾವತಿ ಯೋಜನೆಯಡಿಯಲ್ಲಿ ಸಂಬಂಧಿಸಿದ ಜಿಲ್ಲಾ ಸಮಾಜ ಕಲ್ಯಾಣ/ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳು ನೇರವಾಗಿ ಆಯಾ ಸಂಸ್ಥೆಗಳಿಗೆ ಸರ್ಕಾರದ ಮಾರ್ಗಸೂಚನೆಗಳಂತೆ ಶುಲ್ಕವನ್ನು ಸಂದಾಯ ಮಾಡುವುದಾಗಿ ತಿಳಿಸಿರುವುದರಿಂದ, ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ/ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಮುಂಗಡವಾಗಿ ಶುಲ್ಕ ಪಾವತಿಸಲು ಒತ್ತಾಯಿಸಬಾರದೆಂದು ಈ ಮೂಲಕ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಎಸ್. ಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).